# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತಾರನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಬುಧವಾರ, ದಿನಾಂಕ:13ನೇ ಆಗಸ್ಟ್, 2025**

**(ಸಮಯ: ಬೆಳಗ್ಗೆ 11.00 ಗಂಟೆಗೆ)**

* * *

### 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಮೂರನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಮೂರನೆಯ ಪಟ್ಟಿ

### 02. ಶೂನ್ಯವೇಳೆ ಪ್ರಸ್ತಾವಗಳು

### 03. ಚುನಾವಣಾ ಪ್ರಸ್ತಾವಗಳು

ಶ್ರೀ ಎನ್.ಎಸ್. ಬೋಸ್‌ರಾಜು (ಮಾನ್ಯ ಸಭಾನಾಯಕರು ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು) ಅವರು:–

**2025–26ನೇ ಸಾಲಿನ ವಿಧಾನ ಮಂಡಲದ ಜಂಟಿ ಸಮಿತಿಗಳು ಹಾಗೂ ವಿಧಾನ ಪರಿಷತ್ತಿನ ಈ ಕೆಳಕಂಡ ಸ್ಥಾಯಿ ಸಮಿತಿಗಳಿಗೆ ಸದಸ್ಯರುಗಳನ್ನು ಚುನಾಯಿಸುವ ಕುರಿತು.**

ಅ) ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ 259(1)ನೇ ನಿಯಮದ ಅನುಸಾರವಾಗಿ ಈ ಸಭೆ **ಸರ್ಕಾರಿ ಭರವಸೆಗಳ ಸಮಿತಿಗೆ ಒಂಭತ್ತು** ಜನ ಸದಸ್ಯರನ್ನು ದಾಮಾಷಾ ಪ್ರಾತಿನಿಧ್ಯದ ತತ್ವಕ್ಕನುಸಾರವಾಗಿ ವರ್ಗಾಯಿಸಬಹುದಾದ ಏಕಮತದ ಮೂಲಕ ಚುನಾಯಿಸಬೇಕೆಂದು ಸೂಚಿಸುವುದು.

ಆ) ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ 250(1)ನೇ ನಿಯಮದ ಅನುಸಾರವಾಗಿ ಈ ಸಭೆ **ಹಕ್ಕುಬಾಧ್ಯತಾ ಸಮಿತಿಗೆ ಏಳು** ಜನ ಸದಸ್ಯರನ್ನು ದಾಮಾಷಾ ಪ್ರಾತಿನಿಧ್ಯದ ತತ್ವಕ್ಕನುಸಾರವಾಗಿ ವರ್ಗಾಯಿಸಬಹುದಾದ ಏಕಮತದ ಮೂಲಕ ಚುನಾಯಿಸಬೇಕೆಂದು ಸೂಚಿಸುವುದು.

ಇ) ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ 349(2)ನೇ ನಿಯಮದ ಅನುಸಾರವಾಗಿ ಈ ಸಭೆ **ವಸತಿ ಸಮಿತಿಗೆ ಐದು** ಜನ ಸದಸ್ಯರನ್ನು ದಾಮಾಷಾ ಪ್ರಾತಿನಿಧ್ಯದ ತತ್ವಕ್ಕನುಸಾರವಾಗಿ ವರ್ಗಾಯಿಸಬಹುದಾದ ಏಕಮತದ ಮೂಲಕ ಚುನಾಯಿಸಬೇಕೆಂದು ಸೂಚಿಸುವುದು.

..2..

ಈ) ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ 261(1)ನೇ ನಿಯಮದ ಅನುಸಾರವಾಗಿ ಈ ಸಭೆ **ಸದಸ್ಯರುಗಳ ಖಾಸಗಿ ವಿಧೇಯಕಗಳು ಮತ್ತು ನಿರ್ಣಯಗಳ ಸಮಿತಿಗೆ ಎಂಟು** ಜನ ಸದಸ್ಯರನ್ನು ದಾಮಾಷಾ ಪ್ರಾತಿನಿಧ್ಯದ ತತ್ವಕ್ಕನುಸಾರವಾಗಿ ವರ್ಗಾಯಿಸಬಹುದಾದ ಏಕಮತದ ಮೂಲಕ ಚುನಾಯಿಸಬೇಕೆಂದು ಸೂಚಿಸುವುದು.

ಉ) ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ 245(1)ನೇ ನಿಯಮದ ಅನುಸಾರವಾಗಿ ಈ ಸಭೆ **ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿಗೆ ಐದು** ಜನ ಸದಸ್ಯರನ್ನು ದಾಮಾಷಾ ಪ್ರಾತಿನಿಧ್ಯದ ತತ್ವಕ್ಕನುಸಾರವಾಗಿ ವರ್ಗಾಯಿಸಬಹುದಾದ ಏಕಮತದ ಮೂಲಕ ಚುನಾಯಿಸಬೇಕೆಂದು ಸೂಚಿಸುವುದು.

ಊ) ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ 248ನೇ ನಿಯಮದ ಅನುಸಾರವಾಗಿ ಈ ಸಭೆ **ಸಾರ್ವಜನಿಕ ಉದ್ಯಮಗಳ ಸಮಿತಿಗೆ ಐದು** ಜನ ಸದಸ್ಯರನ್ನು ದಾಮಾಷಾ ಪ್ರಾತಿನಿಧ್ಯದ ತತ್ವಕ್ಕನುಸಾರವಾಗಿ ವರ್ಗಾಯಿಸಬಹುದಾದ ಏಕಮತದ ಮೂಲಕ ಚುನಾಯಿಸಬೇಕೆಂದು ಸೂಚಿಸುವುದು.

ಋ) ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ 254(1)ನೇ ನಿಯಮದ ಅನುಸಾರವಾಗಿ ಈ ಸಭೆ **ಅಧೀನ ಶಾಸನ ರಚನಾ ಸಮಿತಿಗೆ ಐದು** ಜನ ಸದಸ್ಯರನ್ನು ದಾಮಾಷಾ ಪ್ರಾತಿನಿಧ್ಯದ ತತ್ವಕ್ಕನುಸಾರವಾಗಿ ವರ್ಗಾಯಿಸಬಹುದಾದ ಏಕಮತದ ಮೂಲಕ ಚುನಾಯಿಸಬೇಕೆಂದು ಸೂಚಿಸುವುದು.

ಎ) ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ 264ನೇ ನಿಯಮದ ಅನುಸಾರವಾಗಿ ಈ ಸಭೆ **ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಗೆ ಐದು** ಜನ ಸದಸ್ಯರನ್ನು ದಾಮಾಷಾ ಪ್ರಾತಿನಿಧ್ಯದ ತತ್ವಕ್ಕನುಸಾರವಾಗಿ ವರ್ಗಾಯಿಸಬಹುದಾದ ಏಕಮತದ ಮೂಲಕ ಚುನಾಯಿಸಬೇಕೆಂದು ಸೂಚಿಸುವುದು.

ಏ) ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ 267ನೇ ನಿಯಮದ ಅನುಸಾರವಾಗಿ ಈ ಸಭೆ **ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿಗೆ ಐದು** ಜನ ಸದಸ್ಯರನ್ನು ದಾಮಾಷಾ ಪ್ರಾತಿನಿಧ್ಯದ ತತ್ವಕ್ಕನುಸಾರವಾಗಿ ವರ್ಗಾಯಿಸಬಹುದಾದ ಏಕಮತದ ಮೂಲಕ ಚುನಾಯಿಸಬೇಕೆಂದು ಸೂಚಿಸುವುದು.

## 04. ಗಮನ ಸೆಳೆಯುವ ಸೂಚನೆಗಳು

೦1. **ಶ್ರೀ ಮಂಜುನಾಥ್ ಭಂಡಾರಿ ಹಾಗೂ ಶ್ರೀ ಡಿ.ಎಸ್. ಅರುಣ್** ಅವರುಗಳು ಜಿಲ್ಲಾ ಹಾಗೂ ತಾಲ್ಲೂಕು ಪಂಚಾಯಿತಿಗಳಿಗೆ ಶೀಘ್ರವಾಗಿ ಚುನಾವಣೆ ನಡೆಸುವ ಕುರಿತು ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಗಮನ ಸೆಳೆಯುವುದು.

೦2. **ಶ್ರೀ ಐವನ್ ಡಿ'ಸೋಜಾ** ಅವರು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸರ್ಕಾರಿ ವೆನ್‌ಲಾಕ್ ಆಸ್ಪತ್ರೆಯ ಅಧೀನದಲ್ಲಿರುವ ಮೂಡಶೆಡ್ಡೆಯಲ್ಲಿ ಕ್ಷಯ ಮತ್ತು ಎದೆ ರೋಗಗಳ ಆಸ್ಪತ್ರೆಯ 8 ಎಕರೆ ಸ್ಥಳದಲ್ಲಿ ಜಯದೇವ ಹೃದ್ರೋಗ ಹಾಗೂ ಕಿದ್ವಾಯಿ ಕ್ಯಾನ್ಸರ್ ಸಂಸ್ಥೆಯ ಸ್ಯಾಟಲೈಟ್ ಸೆಂಟರ್‌ಗಳನ್ನು ಮೈಸೂರು ಮತ್ತು ಗುಲಬರ್ಗಾ ಮಾದರಿಯಲ್ಲಿ ಪ್ರಾರಂಭಿಸಲು ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

೦૩. **ಶ್ರೀ ಗೋವಿಂದರಾಜು** ಅವರು ಕೋಲಾರ ತಾಲ್ಲೂಕಿನ ಕೆಂದಟ್ಟಿಯಲ್ಲಿ ಘನತ್ಯಾಜ್ಯ ವಿಲೇವಾರಿ ಘಟಕ ನಿರ್ಮಿಸಲಾಗಿದ್ದರೂ ನಗರಸಭೆ ವ್ಯಾಪ್ತಿಯಲ್ಲಿ ಸಂಗ್ರಹಿಸುತ್ತಿರುವ ತ್ಯಾಜ್ಯವನ್ನು ಅವೈಜ್ಞಾನಿಕ ಹಾಗೂ ಅನಧಿಕೃತವಾಗಿ ಸುತ್ತಮುತ್ತಲಿನ ಕೆರೆ, ಕಾಲುವೆ ಹಾಗೂ ತಗ್ಗಿನ ಪ್ರದೇಶಕ್ಕೆ ತ್ಯಾಜ್ಯ ಸುರಿದು ಬಿಲ್ ಮಾಡುತ್ತಿರುವ ಬಗ್ಗೆ ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರ ಗಮನ ಸೆಳೆಯುವುದು.

೦೪. **ಶ್ರೀ ಸಿ.ಟಿ. ರವಿ** ಅವರು ಸರ್ಕಾರಿ ಶಾಲಾ ಕೊಠಡಿಗಳು ಶಿಥಿಲಾವಸ್ಥೆಯಲ್ಲಿರುವುದು ಹಾಗೂ ಕಲ್ಯಾಣ ಕರ್ನಾಟಕದ ಭಾಗದಲ್ಲಿ ಶಿಕ್ಷಕರ ಕೊರತೆಯಿಂದಾಗಿ ಕಲಿಕೆ ಮತ್ತು ಫಲಿತಾಂಶದಲ್ಲಿ ವ್ಯತಿರಿಕ್ತ ಪರಿಣಾಮಗಳು ಉಂಟಾಗಿರುವ ಕುರಿತು ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರ ಗಮನ ಸೆಳೆಯುವುದು.

೦೫. **ಶ್ರೀ ಶಾಂತಾರಾಮ್ ಬುಡ್ನ** ಸಿದ್ದಿ ಅವರು ರಾಜ್ಯದಲ್ಲಿ ಬುಡಕಟ್ಟು ಮತ್ತು ವನವಾಸಿ ಜನಾಂಗಗಳು ವಾಸಿಸುವ ಸ್ಥಳಗಳಲ್ಲಿ ದೇವಸ್ಥಾನಗಳ ನಿರ್ಮಾಣಕ್ಕಾಗಿ ಅನುದಾನ ಮಂಜೂರು ಮಾಡುವ ಬಗ್ಗೆ ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರ ಗಮನ ಸೆಳೆಯುವುದು.

## 05. ನಿಯಮ 330ರ ಮೇರೆಗೆ

೦೧. **ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.** ಅವರು ರಾಜ್ಯದಲ್ಲಿ ಅಡಿಕೆ ತೋಟಗಳಲ್ಲಿ ಕಾಣಿಸಿಕೊಂಡಿರುವ ಕೊಳೆ ರೋಗದಿಂದಾಗಿ ಅಡಿಕೆ ಬೆಳೆಗಾರರು ಸಂಕಷ್ಟಕ್ಕೀಡಾಗಿರುವ ಕುರಿತು ಪ್ರಸ್ತಾಪಿಸುವುದು.(ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು)

೦೨. **ಶ್ರೀಯುತರುಗಳಾದ ಪುಟ್ಟಣ್ಣ, ರಾಮೋಜಿಗೌಡ ಹಾಗೂ ಡಿ.ಟಿ. ಶ್ರೀನಿವಾಸ್(ಡಿ.ಟಿ.ಎಸ್)** ಅವರುಗಳು ಕರ್ನಾಟಕದಲ್ಲಿ ಶೈಕ್ಷಣಿಕ ಗುಣಮಟ್ಟವನ್ನು ವೃದ್ಧಿಸುವ ಸಂಬಂಧ ಸರ್ಕಾರದಿಂದ ಶೈಕ್ಷಣಿಕ ಕಾನೂನುಗಳಿಗೆ ತಿದ್ದುಪಡಿ ತಂದು ಕಾರ್ಯಯೋಜನೆಗಳನ್ನು ಅನುಷ್ಠಾನಗೊಳಿಸುವ ಕುರಿತು ಪ್ರಸ್ತಾಪಿಸುವುದು.(ಮಾನ್ಯ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಸಚಿವರು)

೦૩. **ಶ್ರೀ ಎನ್. ರವಿಕುಮಾರ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು ಹಾಗೂ ಮಾನ್ಯ ಶಾಸಕರುಗಳಾದ ಶ್ರೀ ಕೆ.ಎಸ್. ನವೀನ್ ಹಾಗೂ ಶ್ರೀ ಡಿ.ಎಸ್. ಅರುಣ್** ಅವರುಗಳು ಕಾರ್ಮಿಕ ಇಲಾಖಾ ವತಿಯಿಂದ ಶಾಲೆಗಳನ್ನು ತೆರೆಯಲು ಮೀಸಲಿಟ್ಟಿರುವ 750 ಕೋಟಿ ರೂಪಾಯಿಗಳ ಅನುದಾನವನ್ನು ಸರ್ಕಾರಿ ಶಾಲೆಗಳಿಗೆ ಬಳಕೆ ಮಾಡಿಕೊಂಡು ಕಾರ್ಮಿಕರ ಮಕ್ಕಳಿಗೆ ಪ್ರವೇಶಾತಿಯಲ್ಲಿ ಅವಕಾಶ ಕಲ್ಪಿಸುವುದು ಹಾಗೂ ಬಡ ದಲಿತ ಹಿಂದುಳಿದ ಮಹಿಳಾ ಕಾರ್ಮಿಕರ ಉನ್ನತಿಗಾಗಿ ಮೀಸಲಿಟ್ಟಿರುವ ಹಣದ ಸದ್ಬಳಕೆ ಮಾಡಿಕೊಳ್ಳುವ ಕುರಿತು ಪ್ರಸ್ತಾಪಿಸುವುದು.(ಮಾನ್ಯ ಕಾರ್ಮಿಕ ಸಚಿವರು)

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**